ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ರಾಜ್ಯದ ಸರ್ಕಾರಿ ಸ್ವಾಮ್ಯದ ಆಯುಷ್ ಅಧ್ಯಯನ ಕೇಂದ್ರಗಳ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

992 (1184) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಸ್ವಾಮ್ಯದ ಕೇವಲ 04 ಆಯುಷ್ ಅಧ್ಯಯನ ಕೇಂದ್ರಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹೊಸದಾಗಿ ಆಯುಷ್ ಅಧ್ಯಯನ ಕೇಂದ್ರಗಳನ್ನು ಸ್ಥಾಪಿಸಲು ಚಿಂತನೆ ಇದೆಯೇ;

(ಆ) ಸರ್ಕಾರಿ ಸ್ವಾಮ್ಯದ ಆಯುಷ್ ಅಧ್ಯಯನ ಕೇಂದ್ರಗಳಲ್ಲಿ ಬೋಧಕ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಆಯುಷ್ ಅಧ್ಯಯನ ಕೇಂದ್ರಗಳ ಅನುದಾನ ರಹಿತ/ಅನುದಾನ ಸಹಿತ ಬೋಧಕ ಸಿಬ್ಬಂದಿಗಳ ವೇತನ ತಾರತಮ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ?